ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಅರೆಕಾಲಿಕ ಉಪನ್ಯಾಸಕರ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

961 (1173) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಅರೆಕಾಲಿಕ ಉಪನ್ಯಾಸಕರ (ಕಾಲೇಜು ಲೆಕ್ಚರರ್) ಸಂಖ್ಯೆ ಎಷ್ಟು ; ಖಾಯಂ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು;

(ಆ) ಅರೆಕಾಲಿಕ ಉಪನ್ಯಾಸಕರನ್ನು ಯಾವ ಮಾನದಂಡದಲ್ಲಿ ನೇಮಕಗೊಳಿಸಲಾಗುತ್ತಿದೆ ;

(ಇ) 2018-19 ಹಾಗೂ 2019-20ರಲ್ಲಿ ಯಾವ ಶೈಕ್ಷಣಿಕ ವರ್ಷದಲ್ಲಿ ಯಾವ ತಿಂಗಳಲ್ಲಿ ಅರೆಕಾಲಿಕ ಉಪನ್ಯಾಸಕರನ್ನು ನೇಮಕಗೊಳಿಸಲಾಗಿದೆ ; (ವಿವರ ನೀಡುವುದು)

(ಈ) ಮಂಗಳೂರಿನಲ್ಲಿ ಕಾರ್‌ಸ್ಟ್ರೀಟ್ ಪ್ರಥಮದರ್ಜೆ ಸರ್ಕಾರಿ ಕಾಲೇಜಿನಲ್ಲಿ ಇರುವ ಖಾಯಂ ಉಪನ್ಯಾಸಕರ ಸಂಖ್ಯೆ ಎಷ್ಟು ; ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)